# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1) | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 23 |
| 2) | ಮಾನ್ಯ ಸದಸ್ಯರ ಹೆಸರು | ಶ್ರೀ ಎಸ್.ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| 3) | ಉತ್ತರಿಸಬೇಕಾದ ದಿನಾಂಕ | 08/12/2025 |
| 4) | ಉತ್ತರಿಸುವವರು | ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಸಚಿವರು. |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಅಲ್ಪಸಂಖ್ಯಾತರ ಶಿಕ್ಷಣ ಸಂಸ್ಥೆಗಳಿಗೆ ಸೇರಿದ ಅನುದಾನಿತ ಕೈಗಾರಿಕಾ ತರಬೇತಿ ಸಂಸ್ಥೆ (ಐ.ಟಿ.ಐ)ಗಳಿಗೆ ಅಲ್ಪಸಂಖ್ಯಾತರ ಶಿಕ್ಷಣ ಸಂಸ್ಥೆ ಸ್ಥಾನಮಾನ ನೀಡುವ ಪ್ರಸ್ತಾವನೆಯು ಕೆಲವು ವರ್ಷಗಳಿಂದ ನೆನೆಗುದಿಗೆ ಬಿದ್ದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಅಲ್ಪಸಂಖ್ಯಾತರ ಶಿಕ್ಷಣ ಸಂಸ್ಥೆಗಳಿಗೆ ಸೇರಿದ ಅನುದಾನಿತ/ಖಾಸಗಿ ಕೈಗಾರಿಕಾ ತರಬೇತಿ ಸಂಸ್ಥೆ (ಐ.ಟಿ.ಐ) ಗಳಿಗೆ ಅಲ್ಪಸಂಖ್ಯಾತರ ಶಿಕ್ಷಣ ಸಂಸ್ಥೆ ಸ್ಥಾನಮಾನ ನೀಡಲು ಸರ್ಕಾರದ ಅಧಿಸೂಚನೆ ಸಂಖ್ಯೆ: SDEL 79 ITA 2021, ದಿನಾಂಕ: 18.05.2023ನ್ನು ಹೊರಡಿಸಲಾಗಿರುತ್ತದೆ. ಸದರಿ ಅಧಿಸೂಚನೆಯನ್ವಯ ಅರ್ಜಿ ಸಲ್ಲಿಸಿದ ಈ ಕೆಳಕಂಡ ಎರಡು ಅರ್ಹ ಸಂಸ್ಥೆಗಳಿಗೆ ಅಲ್ಪಸಂಖ್ಯಾತ ಶಿಕ್ಷಣ ಸಂಸ್ಥೆಯ ಸ್ಥಾನಮಾನ ನೀಡಲಾಗಿರುತ್ತದೆ.<br>1. ಅಂಜುಮಾನ್ -ಇ-ಇಸ್ಲಾಮ್, ಖಾಸಗಿ ಕೈಗಾರಿಕಾ ತರಬೇತಿ ಸಂಸ್ಥೆ, ಬೆಳಗಾವಿ-590016.<br>2. ಅಂಜುಮಾನ್ ರಿಫಾಹೆ ಆಮ್ ಖಾಸಗಿ ಕೈಗಾರಿಕಾ ತರಬೇತಿ ಸಂಸ್ಥೆ, ನವನಗರ, ಬಾಗಲಕೋಟೆ-587103 |
| ಆ) | ಹಾಗಿದ್ದಲ್ಲಿ, ಸರ್ಕಾರವು ಈ ಸಂಬಂಧ ಹೊರಡಿಸಿರುವ ಆದೇಶ ಸಂ: ಎಂಡ್ಲೂಡಿ-ಎಲ್‌ಎಂಆರ್/2/2024 (ಪಾರ್ಟ್12) ದಿನಾಂಕ: 06.05.2025ರಲ್ಲಿ ಸೂಚಿಸಿರುವಂತೆ ನಿಯಮಗಳನ್ನು ರೂಪಿಸಲು ಕೌಶಲ್ಯಾಭಿವೃದ್ಧಿ ಇಲಾಖೆಯಿಂದ ಇಲ್ಲಿಯವರೆಗೆ ಕೈಗೊಂಡಿರುವ ಕ್ರಮಗಳೇನು; | ಸರ್ಕಾರದ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ-ಎಲ್ ಎಂಆರ್/2/2024 (ಪಾರ್ಟ್12) ದಿನಾಂಕ: 06.05.2025 ರಲ್ಲಿ ಸೂಚಿಸಿರುವ ನಿಯಮಗಳನ್ವಯ ಕರ್ನಾಟಕ ಕೈಗಾರಿಕಾ ತರಬೇತಿ ಸಂಸ್ಥೆ (ಅಲ್ಪಸಂಖ್ಯಾತರ ಶೈಕ್ಷಣಿಕ ಸಂಸ್ಥೆಗಳ ಮಾನ್ಯತೆ ನಿಬಂಧನೆಗಳು ಮತ್ತು ಷರತ್ತುಗಳು) (ತಾಂತ್ರಿಕ ಶಿಕ್ಷಣ) ನಿಯಮಗಳು 2023ರ ನಿಯಮ 4(6)ಕ್ಕೆ ತಿದ್ದುಪಡಿಯನ್ನು ಹೊರಡಿಸಲು ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನಾ ಇಲಾಖೆಯ ಅಭಿಪ್ರಾಯ ಪಡೆಯಲಾಗಿದ್ದು, ಸೂಕ್ತ ತಿದ್ದುಪಡಿಯನ್ನು ಹೊರಡಿಸಲು ಶೀಘ್ರದಲ್ಲೇ ಕ್ರಮವಹಿಸಲಾಗುವುದು. |
| ಇ) | ಈ ಪ್ರಸ್ತಾವನೆಯು ಯಾವ ಹಂತದಲ್ಲಿದೆ; ಇಷ್ಟು ವಿಳಂಬಕ್ಕೆ ಕಾರಣಗಳೇನು; ಯಾವ ಕಾಲಮಿತಿಯೊಳಗೆ ಇದನ್ನು ಇತ್ಯರ್ಥಪಡಿಸಲಾಗುವುದು?<br>(ದಾಖಲಾತಿ ಸಹಿತ ಸಂಪೂರ್ಣ ವಿವರ ನೀಡುವುದು) | |

**ಸಂಖ್ಯೆ: ಕೌಉಜೀಇ 90 ಕೈತಪ್ರ 2025**

(ಡಾ. ಶರಣಪ್ರಕಾಶ ಆರ್ ಪಾಟೀಲ್)
ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು.